ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ**

ಮನೆ ಮನೆಗೆ ಗಂಗೆ
ಜಲ ಜೀವನ್ ಮಿಷನ್

# ಸುಸ್ಥಿರ ಗ್ರಾಮೀಣ ನೀರು ಸರಬರಾಜು ಯೋಜನೆ; ದಾವಣಗೆರೆಯ ಸವಳಂಗ ಗ್ರಾ.ಪಂ. ಸಾಧನೆ





ಗ್ರಾಮೀಣ ಭಾಗದ ಜನರು ಶುದ್ಧ ಕುಡಿಯುವ ನೀರಿನಿಂದ ವಂಚಿತರಾಗಬಾರದೆಂಬ ದಿಸೆಯಿಂದ ಆರಂಭಿಸಲಾದ ಜಲಜೀವನ್ ಮಿಷನ್ ಯೋಜನೆಯು, ದೇಶದ ಮೂಲೆ ಮೂಲೆಗಳಿಗೂ ತಲುಪುತ್ತಿದೆ. ಮನೆಮನೆಗೂ ನಳ ಸಂಪರ್ಕ ಕಲ್ಪಿಸುವ ಮೂಲಕ, ವ್ಯವಸ್ಥಿತವಾಗಿ ಜೀವಜಲ ಪೂರೈಸಲಾಗುತ್ತಿದೆ. ಕಾರ್ಯಾತ್ಮಕ ಗೃಹ ನಳ ಸಂಪರ್ಕದ ಬಳಿಕ ಯೋಜನೆಯಲ್ಲಿ ಸುಸ್ಥಿರತೆ ಕಾಯ್ದುಕೊಂಡು ಯಶಸ್ವಿಯಾಗಿ ನಿರ್ವಹಿಸಲು ಕಾರ್ಯಾಚರಣೆ ಮತ್ತು ನಿರ್ವಹಣೆ (O & M) ನೀತಿಯನ್ನು ಅನುಷ್ಠಾನಗೊಳಸಲಾಗಿದೆ. ಈ ವಿಷಯವಾಗಿ ಬೆಣ್ಣೆದೋಸೆಯ ತವರು ದಾವಣಗೆರೆ ಜಿಲ್ಲೆಯ ಪ್ರಗತಿಯ ಕುರಿತ ವರದಿ ಇಲ್ಲಿದೆ.

ಮಲೆನಾಡಿನ ಮಧ್ಯಭಾಗಕ್ಕೆ ಹೊಂದಿಕೊಂಡಿರುವ ದಾವಣಗೆರೆ ಜಿಲ್ಲೆಯು ಜಲಜೀವನ್ ಮಿಷನ್ ಯೋಜನೆಯ ಅನುಷ್ಠಾನದ ವಿಷಯವಾಗಿ ಸುಸ್ಥಿರ ಪ್ರಗತಿ ಸಾಧಿಸುತ್ತಿದೆ. ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ನ್ಯಾಮತಿ ತಾಲೂಕಿನ ಸವಳಂಗ ಗ್ರಾಮ ಪಂಚಾಯಿತಿಯು ಕಾರ್ಯಾಚರಣೆ ಮತ್ತು ನಿರ್ವಹಣೆ (O & M) ನೀತಿಯನ್ನು ಕರ್ನಾಟಕ ಸುಸ್ಥಿರ ಗ್ರಾಮೀಣ ನೀರು ಸರಬರಾಜು ಯೋಜನೆಯ ಜಿಲ್ಲಾ ತಾಂತ್ರಿಕ ಘಟಕದ ನೆರವಿನೊಂದಿಗೆ ಅಳವಡಿಸಿಕೊಂಡಿದೆ. **2025ರ ಏಪ್ರಿಲ್ 17ರಂದು ನಡೆದ ಗ್ರಾಮ ಪಂಚಾಯಿತಿಯ ವಿಶೇಷ ಗ್ರಾಮ ಸಭೆಯಲ್ಲಿ ಈ ಪ್ರಕ್ರಿಯೆ ಪೂರ್ಣಗೊಂಡಿದೆ.**



ಸವಳಂಗ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 6 ಗ್ರಾಮಗಳಿವೆ.
ಪ್ರಸ್ತುತ ದಾವಣಗೆರೆ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಯ ಖಾತೆಗಳನ್ನು HDFC ಬ್ಯಾಂಕ್‌ನಲ್ಲಿ ತೆರೆಯಲಾಗಿದೆ. ಇದರಲ್ಲಿ ಸವಳಂಗ ಗ್ರಾಮ ಪಂಚಾಯಿತಿಯ ಖಾತೆಯೂ ಸೇರಿದ್ದು , 2 ಲಕ್ಷಕ್ಕೂ ಹೆಚ್ಚು ಹಣವನ್ನು ಬ್ಯಾಂಕ್ ಖಾತೆಗೆ ಜಮಾ ಮಾಡಲಾಗಿದೆ.

**ಕೊಡತಾಳು ಮತ್ತು ಮದಾಪುರ ಗ್ರಾಮಗಳಲ್ಲಿ ನಿರಂತರ ನೀರು ಪೂರೈಕೆ**

ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಕಾರ್ಯಾಚರಣೆ ಮತ್ತು ನಿರ್ವಹಣೆ ಆಯವ್ಯಯವನ್ನು ತಯಾರಿಸಲಾಗಿದೆ. ಈಗಾಗಲೇ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೊಡತಾಳು ಮತ್ತು ಮದಾಪುರ ಗ್ರಾಮಗಳನ್ನು 24X7 ನೀರು ಸರಬರಾಜು ಗ್ರಾಮವೆಂದು ಘೋಷಣೆ ಮಾಡಲಾಗಿದೆ. ಉಳಿದ ಗ್ರಾಮಗಳಲ್ಲಿ ಅಂತಿಮ ಹಂತದ ಕೆಲಸಗಳು ನಡೆಯುತ್ತಿವೆ.

**ಸ್ವ-ಸಹಾಯ ಗುಂಪಿನ ಸದಸ್ಯರ ಸಹಕಾರ**

ಈಗಾಗಲೇ 24X7 ನೀರು ಸರಬರಾಜು ಗ್ರಾಮವೆಂದು ಘೋಷಣೆಯಾದ ಗ್ರಾಮಗಳಲ್ಲಿ ಸ್ಥಳೀಯ ಸ್ವ-ಸಹಾಯ ಗುಂಪಿನ ಮಹಿಳಾ ಸದಸ್ಯರ ಸಹಕಾರದೊಂದಿಗೆ ಮನೆ ಮನೆ ವ್ಯಾಲ್ಯು ಮೀಟರ್ ಅಂಕೆ-ಸಂಖ್ಯೆ ತೆಗೆದುಕೊಳ್ಳಲು ಒಪ್ಪಂದ ಮಾಡಿಕೊಳ್ಳಲಾಗಿದೆ. ನಿಸರ್ಗ ಸ್ವ-ಸಹಾಯ ಗುಂಪಿನ ಸದಸ್ಯರು ಕಾರ್ಯಾಚರಣೆ ಮತ್ತು ನಿರ್ವಹಣೆಯಲ್ಲಿ ಭಾಗಿಯಾಗಿ ಮಾಸಿಕ ನೀರಿನ ಶುಲ್ಕ ವಸೂಲಾತಿಯಲ್ಲಿ ಸಹಕರಿಸುತ್ತಿದ್ದಾರೆ. ಹೀಗಾಗಿ ವಸೂಲಾದ ನೀರಿನ ಕಂದಾಯದಲ್ಲಿ ಶೇಕಡ 10ರಷ್ಟು ಪಾಲನ್ನು ಗ್ರಾಮ ಪಂಚಾಯಿತಿಯಿಂದ ಸ್ವ-ಸಹಾಯ ಗುಂಪಿಗೆ ನೀಡುವ ವ್ಯವಸ್ಥೆ ಮಾಡಲಾಗಿದೆ. ಆ ಮೂಲಕ ಎಲ್ಲಾ ವ್ಯವಸ್ಥೆಯು ಅಚ್ಚುಕಟ್ಟಾಗಿ ನಡೆಯುತ್ತಿದೆ.

## 57 ಗ್ರಾಮ, 14864 ನಳ ಸಂಪರ್ಕ,

# 67,066

## ಜನರಿಗೆ ಪ್ರಯೋಜನ

ಜೆಜೆಎಂ ಯೋಜನೆಯ ಸಮರ್ಪಕ ಅನುಷ್ಠಾನದ ವಿಷಯದಲ್ಲಿ ದಾವಣಗೆರೆ ಜಿಲ್ಲೆಯು ರಾಜ್ಯದಲ್ಲಿ ಮಾದರಿ ಜಿಲ್ಲೆಯಾಗಿ ವೇಗವಾಗಿ ಸಾಗುತ್ತಿದೆ. ಜಿಲ್ಲಾ ಮಟ್ಟದಲ್ಲಿ 100 ಗ್ರಾಮಗಳನ್ನು 24/7 ನಿರಂತರ ನೀರು ಸರಬರಾಜು ಗ್ರಾಮವಾಗಿ ಘೋಷಣೆ ಮಾಡುವ ನಿಟ್ಟಿನಲ್ಲಿ ಪ್ರಯತ್ನ ಸಾಗಿದೆ. ಈಗಾಗಲೇ 57 ಗ್ರಾಮಗಳನ್ನು 24/7 ನಿರಂತರ ನೀರು ಸರಬರಾಜು ಗ್ರಾಮವಾಗಿ ಘೋಷಣೆ ಮಾಡಲಾಗಿದ್ದು 14,864 ನಳ ಸಂಪರ್ಕ ಕಲ್ಪಿಸಲಾಗಿದೆ. ಜಿಲ್ಲೆಯಲ್ಲಿ 67,066 ಜನರು ಶುದ್ಧ ಹಾಗೂ ಆರೋಗ್ಯಕರ ನೀರು ಕುಡಿಯುತ್ತಿದ್ದಾರೆ.

ಒಟ್ಟಿನಲ್ಲಿ ಜಲಜೀವನ್ ಮಿಷನ್ ಯೋಜನೆಯಡಿ ದಾವಣೆಗೆರೆ ಜಿಲ್ಲೆಯ ಗ್ರಾಮಗಳಿಗೆ ನಿರಂತರ ನೀರು ಪೂರೈಕೆ ಕಾರ್ಯಕ್ಕೆ ವೇಗ ಸಿಕ್ಕಿದೆ. ಕಾರ್ಯಾಚರಣೆ ಮತ್ತು ನಿರ್ವಹಣೆ ನೀತಿಯ ಸಮರ್ಪಕ ಅಳವಡಿಕೆಯೊಂದಿಗೆ ಸವಳಂಗ ಗ್ರಾಮದಲ್ಲಿ ಸಮುದಾಯದ ಸಹಭಾಗಿತ್ವವನ್ನು ಕಾಣಬಹುದಾಗಿದೆ.